SD

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 15(37)
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 13-12-2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ಅನುದಾನ ಹಾಗೂ ಅನುದಾನರಹಿತ ಶಾಲಾ/ಕಾಲೇಜುಗಳ ಶಿಕ್ಷಕರಿಗೂ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸುವ ಕುರಿತ ಸರ್ಕಾರಕ್ಕೆ ಬಂದಿರುವ ಮನವಿಗಳೆಷ್ಟು: | ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲಾ/ಕಾಲೇಜುಗಳ ಶಿಕ್ಷಕರಿಗೂ 'ಜ್ಯೋತಿ ಸಂಜೀವಿನಿ" ಯೋಜನೆಯನ್ನು ವಿಸ್ತರಿಸುವ ಕುರಿತು ಮಾನ್ಯ ಸಚಿವರು, ಶಾಸಕರು, ಮತ್ತು ಕರ್ನಾಟಕ ವಿಧಾನ ಸಭೆ/ಪರಿಷತ್ತಿನ ಮಾನ್ಯ ಸದಸ್ಯರುಗಳು ಹಾಗೂ ಶಿಕ್ಷಕರ ಸಂಘಗಳಿಂದ ಹಲವಾರು ಮನವಿಗಳನ್ನು ಸ್ವೀಕರಿಸಲಾಗಿದೆ. |
| ಆ | ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು: | ಸರ್ಕಾರಿ ನೌಕರರು ಚಿಕಿತ್ಸೆ ಪಡೆದ ನಂತರ ಸದರಿ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿತ್ತು. ಪ್ರಸ್ತುತ ಜ್ಯೋತಿ ಸಂಜೀವಿನಿ ಯೋಜನೆಯಡಿ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಆದರೆ ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br>ಮುಂದುವರೆದು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಕರ್ನಾಟಕ ಸರ್ಕಾರಿ ನೌಕರರ(ವೈದ್ಯಕೀಯ ಹಾಜರಾತಿ) ನಿಯಮಗಳು-1963 ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು)ನಿಯಮಗಳು-1999ರ ನಿಯಮ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಿಕ್ಷಕರು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ. |
| ಇ | ಶಿಕ್ಷಕರಿಗೂ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಇರುವ ಅಡೆತಡೆಗಳೇನು: ಈ ಅಡೆತಡೆಗಳನ್ನು ಸರಿಪಡಿಸಿ, ಈ ವ್ಯಾಪ್ತಿಗೆ ಶಿಕ್ಷಕನ್ನು ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: | |
| ಈ | ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಒದಗಿಸಲಾಗುವುದು? | ಉದ್ಭವಿಸುವುದಿಲ್ಲ |

ಇಪಿ 452 ಎಸ್‌ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು